**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು</u>**

**<u>ಸಿಸಿ ಸಂಖ್ಯೆ: 1217/2023</u>**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ,
ನಂಜನಗೂಡು.

ವಿರುದ್ಧ

**ಆರೋಪಿ** : ಶ್ರೀ.ಪುಟ್ಟರಾಜು

:: **<u>ದೋಷಾರೋಪಣೆ</u>** ::

**ಶ್ರೀ ಸತೀಶ. ಕೆ.ಜಿ. ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿಯಾದಃ-

ಶ್ರೀ.ಪುಟ್ಟರಾಜು ಬಿನ್ ಮಾದೇಗೌಡ,
ವಯಸ್ಸು ಸುಮಾರು 30 ವರ್ಷ,

ಗುಂಡ್ಲುಪೇಟೆ ತಾಲ್ಲೂಕಿನ ಊರ್ದಹಳ್ಳಿ ಗ್ರಾಮದ ನಿವಾಸಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 08.03.2023 ರಂದು ಸಂಜೆ 05.45 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಹದಿನಾರು ಮೋಳೆ ಗ್ರಾಮದಲ್ಲಿ ಆರೋಪಿಯಾದ ನೀವು ನಿಮ್ಮ ಸ್ನೇಹಿತನಿಗೆ ಸೇರಿದ KA-13-EG-7113 TVS Star City ಬೈಕ್‌ನಲ್ಲಿ ಒಂದು ಪ್ಲಾಸ್ಟಿಕ್ ಚೀಲದಲ್ಲಿ ಒಟ್ಟು 3.330 ಲೀಟರ್ ನ 90 ಎಂ.ಎಲ್ ನ 37 Haywards Cheers Whiskey ಯ ಮದ್ಯ ತುಂಬಿದ ಪೌಚ್ ಗಳನ್ನು ಆರೋಪಿಯಾದ ನೀವು ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ಲಾಭಗಳಿಸುವ ಉದ್ದೇಶದಿಂದ ಮಾರಾಟ ಮಾಡಲು ಹದಿನಾರು ಗ್ರಾಮದಿಂದ ಹೊಸಕೋಟೆ ಕಡೆಗೆ ಸಾಗಾಣಿಕೆ ಮಾಡಿಕೊಂಡು ಹೋಗುತ್ತಿದ್ದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 32 ಮತ್ತು 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1- ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

ಆರೋಪಿ ಉತ್ತರ:

ಪ್ರಶ್ನೆ:2- ಸದರಿ ಆರೋಪಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

ಆರೋಪಿ ಉತ್ತರ:

(ಆರೋಪಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಯು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕ: 24.09.2025

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.